## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1290 |
| ಸದಸ್ಯರ ಹೆಸರು | ಶ್ರೀ ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24.12.2021 |

| ಕ್ರಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ. | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಗ್ರಾಮೀಣ ಸುಮಾರ್ಗ ಯೋಜನೆಯಡಿಯಲ್ಲಿ ಬಳಕೆಯಾದ ಅನುದಾನ ಎಷ್ಟು; (ವಿವರ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ "ಗ್ರಾಮೀಣ ಸುಮಾರ್ಗ ಯೋಜನೆ"ಯು ಜಾರಿಯಾಗಿರುವುದಿಲ್ಲ. |
| ಆ. | ಗ್ರಾಮೀಣ ಭಾಗಗಳ ರಸ್ತೆಗಳ ಸುಧಾರಣೆಗೆ ಘೋಷಿಸಲಾದ "ಗ್ರಾಮೀಣ ಸುಮಾರ್ಗ ಯೋಜನೆ" ಯು ಪ್ರಗತಿ ಕಾಣದಿರಲು ಕಾರಣವೇನು; (ವಿವರ ನೀಡುವುದು) | ರಾಜ್ಯದ ಗ್ರಾಮೀಣ ಪ್ರದೇಶದ 20000 ಕಿ.ಮೀ ಉದ್ದದ ಪ್ರಮುಖ ರಸ್ತೆಗಳನ್ನು ಮುಂದಿನ 5 ವರ್ಷಗಳಲ್ಲಿ ನಿರ್ವಹಣೆ ಮಾಡಿ ಸುಸ್ಥಿತಿಯಲ್ಲಿಡಲು 'ಗ್ರಾಮೀಣ ಸುಮಾರ್ಗ ಯೋಜನೆ" ಜಾರಿಗೆ ತರಲು ಉದ್ದೇಶಿಸಿ ಸಚಿವ ಸಂಪುಟದ ಸಂಖ್ಯೆ ಸಿ-349/2019 ದಿನಾಂಕ.14.06.2019 ರಲ್ಲಿ ಅನುಮೋದನೆ ಪಡೆಯಲಾಗಿತ್ತು.<br><br>ಆದರೆ ರಾಜ್ಯದಲ್ಲ ಉಂಟಾದ ನೆರೆ ಮತ್ತು ಮಳೆಯ ಕಾರಣದಿಂದ ಯೋಜನೆಯನ್ನು 2019-20 ನೇ ಸಾಲಿನಲ್ಲಿ ಜಾರಿಗೆ ತಂದಿರುವುದಿಲ್ಲ, ಆದಾಗ್ಯೂ ರೂ.7334.49 ಕೋಟಿಗಳ ಪರಿಷ್ಕೃತ ಪ್ರಸ್ತಾವನೆಯನ್ನ ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿದ್ದು, ಆರ್ಥಿಕ ಸಂಪನ್ಮೂಲ ಕೊರತೆಯಿಂದ ಅನುಮೋದನೆಯಾಗಿರುವುದಿಲ್ಲ.<br><br>ಆದಾಗ್ಯೂ, 2021-22ನೇ ಸಾಲಿನ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ರಾಜ್ಯದ ಗ್ರಾಮೀಣ ಪ್ರದೇಶದ ರಸ್ತೆಗಳ ಅಭಿವೃದ್ಧಿಗೆ ರೂ.1407.00 ಕೋಟಿಗಳ ಅನುದಾನ ಹಂಚಿಕೆ ಮಾಡಲಾಗಿದೆ. |
| ಇ. | ಮೇಲ್ಕಂಡ ಜಿಲ್ಲೆಗಳಲ್ಲಿ ಈ ಯೋಜನೆಯಡಿ ಈವರೆಗೆ ಎಷ್ಟು ಕಿ.ಮೀ. ರಸ್ತೆಗಳನು ಅಭಿವೃದ್ಧಿಪಡಿಸಲಾಗಿದೆ ಮತ್ತು ಎಲ್ಲೆಲ್ಲಿ? (ವಿವರ ನೀಡುವುದು) | "ಗ್ರಾಮೀಣ ಸುಮಾರ್ಗ ಯೋಜನೆ"ಯು ಜಾರಿಯಾಗಿಲ್ಲದ ಕಾರಣ ಈ ಯೋಜನೆಯಡಿ ಯಾವುದೇ ರಸ್ತೆ ಅಭಿವೃದ್ಧಿ ಪಡಿಸಿರುವುದಿಲ್ಲ. |

ಸಂಖ್ಯೆ: ಗ್ರಾಅಪ:15ನೇವಿಸ:141:ಆರ್.ಆರ್.ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು



ated from eOffice by RAMESH .D.O, RDPR-DD(RDO), DEPUTY DIRECTOR, RDPR SEC on 17/12/2021 03:32 PM